21

# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಚುನಾವಣೆ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 3/6/2020

### ಸ್ಟೇಟ್ ನ್ಯೂಸ್

### ಪರಿಷತ್ ಚುನಾವಣೆಗೆ ದಿನಾಂಕ ಶೀಘ್ರ

**ಬೆಂಗಳೂರು:** ರಾಜ್ಯಸಭೆ ಚುನಾವಣೆಗೆ ದಿನಾಂಕ ನಿಗದಿಯಾದ ಬೆನ್ನಲ್ಲೇ ವಿಧಾನ ಪರಿಷತ್ ಚುನಾವಣೆ ಸಂಬಂಧ ಅಧಿಸೂಚನೆ ಹೊರಬೀಳುವ ನಿರೀಕ್ಷೆಯಿದೆ. ಜೂನ್ 30ರಂದು ರಾಜ್ಯ ವಿಧಾನ ಪರಿಷತ್‌ನ 7 ಸದಸ್ಯರು ನಿವೃತ್ತಿ ಹೊಂದಲಿದ್ದಾರೆ. ಈ ಹಿನ್ನೆಲೆಯಲ್ಲಿ ಹೊಸ ಸದಸ್ಯರ ಆಯ್ಕೆಗೆ ಚುನಾವಣೆ ನಡೆಸಬೇಕಿದ್ದು, ವಿಧಾನಸಭೆ ಮೂಲಕ ವಿಧಾನ ಪರಿಷತ್‌ಗೆ ಸದಸ್ಯರ ಆಯ್ಕೆ ನಡೆಯಲಿದೆ. ವಿಧಾನಸಭೆಯಲ್ಲಿನ ಸಂಖ್ಯಾಬಲದ ಆಧಾರದಲ್ಲಿ ಬಿಜೆಪಿ 3, ಕಾಂಗ್ರೆಸ್ 2 ಹಾಗೂ ಜೆಡಿಎಸ್ 1 ಸುಲಭವಾಗಿ ಗೆದ್ದುಕೊಳ್ಳಲು ಅವಕಾಶವಿದೆ. ಇದರ ಹೊರತಾಗಿ ಉಳಿಯುವ ಮತ್ತೊಂದು ಸ್ಥಾನದ ಸಂಬಂಧದಲ್ಲಿ ಎಲ್ಲ ಪಕ್ಷಗಳಿಗೂ ಮತಗಳ ಕೊರತೆಯಾಗಲಿದೆ. ಹಾಗಾಗಿ 7ನೇ ಸ್ಥಾನಕ್ಕೆ ಪೈಪೋಟಿ ಇರಲಿದೆ.

**ಉಸ್ತುವಾರಿ ನೇಮಕ:** ರಾಜ್ಯಸಭೆ ಚುನಾವಣೆ ಸಂದರ್ಭದಲ್ಲಿ ಕೋವಿಡ್ ಮಾರ್ಗಸೂಚಿ ಪಾಲನೆಯ ಉಸ್ತುವಾರಿ ನೋಡಿಕೊಳ್ಳಲು ಪ್ರವಾಸೋದ್ಯಮ ಇಲಾಖೆ ನಿರ್ದೇಶಕ ಕೆ.ಎನ್. ರಮೇಶ್ ಅವರನ್ನು ಮುಖ್ಯ ಕಾರ್ಯದರ್ಶಿ ನೇಮಿಸಿದ್ದಾರೆ.